**All India Radio: Bangalore**
**08.03.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಇಂದು ಅಂತಾರಾಷ್ಟ್ರೀಯ ಮಹಿಳಾ ದಿನ ; ರಾಷ್ಟ್ರಪತಿ, ಪ್ರಧಾನಿ, ಮುಖ್ಯಮಂತ್ರಿ ಸೇರಿದಂತೆ ಗಣ್ಯರಿಂದ ಶುಭಾಶಯ
2. ರಾಜ್ಯ ಬಜೆಟ್ ದೇಶಕ್ಕೆ ಮಾದರಿ ; ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಮರ್ಥನೆ
3. ರೈತರಿಗೆ ಊರುಗೋಲಾಗಿರುವ ಕೃಷಿ ಪತ್ತಿನ ಸಹಕಾರಿ ಸಂಘ ; ಸಚಿವ ಕೆ.ಎನ್. ರಾಜಣ್ಣ
4. ದಾಖಲೆಯ ಸಾಲದ ಹೊರೆ ಹೆಚ್ಚಿಸಿದ ರಾಜ್ಯ ಬಜೆಟ್ ; ಪರಿಷತ್ ಸದಸ್ಯ ಸಿ.ಟಿ. ರವಿ ಆರೋಪ
5. ಆಕಾಶವಾಣಿ ಸುದ್ದಿ ಎಂದಿಗೂ ವಿಶ್ವಾಸಾರ್ಹ - ಮಹಾ ನಿರ್ದೇಶಕಿ ಪ್ರಜ್ಞಾ ಪಾಲಿವಾಲ್ ಗೌರ್ ಅಭಿಮತ

<><><><>

ಇಂದು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ಮಹಿಳಾ ದಿನಾಚರಣೆಯ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹೆಣ್ಣೆಂದರೆ ಸಹನೆ, ಸಹಿಷ್ಣುತೆ, ಪ್ರೀತಿ, ತ್ಯಾಗ, ಮಮತೆಯ ಸಾಕಾರ ಮೂರ್ತಿ ಎಂದು ಬಣ್ಣಿಸಿದ್ದಾರೆ. ಅಂತಾರಾಷ್ಟ್ರೀಯ ಮಹಿಳಾ ದಿನದ ಈ ಸಂದರ್ಭದಲ್ಲಿ ದೌರ್ಜನ್ಯ, ಅಸಮಾನತೆಗಳ ವಿರುದ್ಧ ಮಹಿಳೆಯರ ದನಿಗೆ ಎಲ್ಲರೂ ದನಿಗೂಡಿಸೋಣ ಎಂದು ಕರೆ ನೀಡಿದ್ದಾರೆ. ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಇಂದು ಅಂತಾರಾಷ್ಟ್ರೀಯ ಮಹಿಳಾ ದಿನ ಆಚರಿಸಲಾಯಿತು. ಈ ವೇಳೆ ಕೇಂದ್ರ ಸರ್ಕಾರದ ಆರ್ಥಿಕ ನೆರವಿನಿಂದ ಸ್ವಾವಲಂಬನೆ ಬದುಕು ಕಂಡುಕೊಂಡಿರುವ ಮಹಿಳೆಯರನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಗೌರವಿಸಿದರು. ಮಹಿಳೆಯರ ಸಬಲೀಕರಣದಿಂದ ದೇಶದ ಸರ್ವಾಂಗೀಣ ಅಭಿವೃದ್ಧಿ ಸಾಧ್ಯ ಎಂದು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಹೇಳಿದ್ದಾರೆ. ದಾವಣಗೆರೆ ತಾಲ್ಲೂಕಿನ ಬಾಡಾ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಸಂದರ್ಭದಲ್ಲಿ ಮಾತನಾಡಿದ ಅವರು, ಕೆಲಸ ಮತ್ತು ಕುಟುಂಬದ ನಿರ್ವಹಣೆಯ ನಡುವೆಯೂ ಮಹಿಳೆಯರು ತಮ್ಮ ಆರೋಗ್ಯದ ಕಡೆಗೂ ಹೆಚ್ಚು ಗಮನಹರಿಸಬೇಕಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಸಮಾನತೆ, ಪ್ರಗತಿ, ಸೇರ್ಪಡೆಯೊಂದಿಗೆ ಪ್ರತಿಯೊಬ್ಬ ಮಹಿಳೆಯನ್ನು ಸಬಲೀಕರಣಗೊಳಿಸಿವ ಧ್ಯೇಯ ವಾಕ್ಯದಡಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿದೆಡೆಗಳಲ್ಲಿ ಆಚರಿಸಲಾಗುತ್ತಿದೆ. ದಿನಗೂಲಿ ಕೆಲಸ ಮಾಡುತ್ತ ಜೀವನ ನಿರ್ವಹಿಸುತ್ತಿದ್ದ ಬೆಳಗಾವಿ ತಾಲೂಕು ಮುಚ್ಚಂಡಿ ಗ್ರಾಮದ ೧೧ ಜನ ಮಹಿಳೆಯರು ಬೆಳಗಾವಿ ಜಿಲ್ಲಾ ಪಂಚಾಯತ್ ಕಚೇರಿ ಆವರಣದಲ್ಲಿ ಅಕ್ಕ ಕೆಫೆ ಪ್ರಾರಂಭಿಸುವುದರ ಮೂಲಕ ತೃಪ್ತಿಕರ ಸ್ವಾವಲಂಬಿ ಜೀವನ ನಿರ್ವಹಿಸುತ್ತಿದ್ದಾರೆ. ಮುಚ್ಚಂಡಿ ಗ್ರಾಮದ ಜಾನಕಿ ಆಕಾಶವಾಣಿಗೆ ತಮ್ಮ ಅನುಭವಗಳನ್ನು ಹಂಚಿಕೊಂಡಿದ್ದು ಸ್ವಂತ ದುಡಿಮೆಯ ಯೋಚನೆ ಮಾಡುವಾಗ ಸರ್ಕಾರದಿಂದ ಕೆಫೆ ನಡೆಸುವ ಅವಕಾಶ ಸಿಕ್ಕಿರುವುದು ತುಂಬಾ ಸಂತೋಷವಾಗಿದೆ ಎಂದು ತಿಳಿಸಿದ್ದಾರೆ.

<><><><>

ಮಹಿಳಾ ಸಬಲೀಕರಣದಲ್ಲಿ ಸಾರಿಗೆ ಇಲಾಖೆಯ ಶಕ್ತಿ ಯೋಜನೆ ಮಹತ್ವದ್ದಾಗಿದ್ದು, ಈ ಯೋಜನೆ ಸರಕಾರ ಮಹಿಳೆಯರಿಗೆ ನೀಡಿದ ನಿಜವಾದ ಗೌರವ ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ತಿಳಿಸಿದ್ದಾರೆ. ಬೆಂಗಳೂರಿನ ಕೆಎಸ್ಆರ್‌ಟಿಸಿ ಕೇಂದ್ರ ಕಚೇರಿಯಲ್ಲಿ ನಡೆದ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಳೆದ ಒಂದೂವರೆ ವರ್ಷದಿಂದ ಮಹಿಳೆಯರ ಶ್ರೇಯೋಭಿವೃದ್ಧಿಗೆ ಶಕ್ತಿ ಯೋಜನೆ ಸಹಾಯಕವಾಗಿದೆ. ಈಗಾಗಲೇ ೪೦೦ ಕೋಟಿ ಮಹಿಳೆಯರು ನಮ್ಮ ಸಾರಿಗೆ ಬಸ್‌ಗಳಲ್ಲಿ ಪ್ರಯಾಣ ಮಾಡಿದ್ದಾರೆ ಎಂದು ಹೇಳಿದ್ದಾರೆ.

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೇಶಕ್ಕೆ ಮಾದರಿಯಾಗಿರುವ ಬಜೆಟ್ ಮಂಡನೆ ಮಾಡಿದ್ದು, ಪ್ರತಿಪಕ್ಷಗಳ ಆರೋಪದಲ್ಲಿ ಯಾವುದೇ ಹುರುಳಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಜೆಟ್ ನಲ್ಲಿ ಸಮಾಜದ ಎಲ್ಲಾ ವರ್ಗದವರ

ಅಭಿವೃದ್ಧಿಗೆ ಆದ್ಯತೆ ನೀಡಲಾಗಿದ್ದು , 'ಬ್ರ್ಯಾಂಡ್ ಬೆಂಗಳೂರಿನ ಮಹತ್ವದ ಯೋಜನೆಗಳಿಗೆ ಅನುದಾನ ನೀಡಲಾಗಿದೆ. ರಾಜಧಾನಿಯಲ್ಲಿರುವ ೧. ಕೋಟಿ ೪೦ ಲಕ್ಷ ಜನರಿಗೆ ಅನುಕೂಲವಾಗಲಿದೆ. ಮುಂಬರುವ ಎಲ್ಲಾ ಮೆಟ್ರೋ ಮಾರ್ಗಗಳಲ್ಲಿ ಡಬಲ್ ಡೆಕ್ಕರ್ ಮೇಲ್ಸೇತುವೆ ಮಾಡಲಾಗುವುದು ಎಂದು ತಿಳಿಸಿದ್ದಾರೆ. ರಾಜಕಾಲುವೆ ಅಕ್ಕಪಕ್ಕದಲ್ಲಿ ೫೦ ಅಡಿ ಬಫರ್ ವಲಯದಲ್ಲಿ ೩೦೦ ಕಿಲೋಮೀಟರ್ ಉದ್ದದಷ್ಟು ರಸ್ತೆ ನಿರ್ಮಾಣ ಮಾಡಲಾಗುವುದು. ಈ ಯೋಜನೆಗೆ ೩ ಸಾವಿರ ಕೋಟಿ ರೂಪಾಯಿ ಮೀಸಲಿಡಲಾಗಿದೆ. ಬಫರ್ ರಸ್ತೆ, ಮೇಲ್ಸೇತುವೆ, ಟನಲ್ ರಸ್ತೆಗಳ ಮೂಲಕ ಬೆಂಗಳೂರಿನಲ್ಲಿ ೭೦೦-೮೦೦ ಕಿಲೋಮೀಟರ್ ಉದ್ದದಷ್ಟು ಹೊಸ ರಸ್ತೆ ನಿರ್ಮಾಣಕ್ಕೆ ಆದ್ಯತೆ ನೀಡಿದ್ದು, ಜನರ ಸಮಸ್ಯೆಗೆ ಪರಿಹಾರ ನೀಡಲು ಸರ್ಕಾರ ಸಾಲ ಮಾಡಿಯಾದರೂ ಈ ಯೋಜನೆ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ ಕಲ್ಯಾಣ ಕರ್ನಾಟಕಕ್ಕೆ ಬಜೆಟ್‌ನಲ್ಲಿ ಆದ್ಯತೆ ನೀಡಲಾಗಿದ್ದು, ನೀರಾವರಿ ಇಲಾಖೆಗೆ ಕಳೆದ ಬಾರಿಗಿಂತ ೨ ಸಾವಿರ ಕೋಟಿ ರೂಪಾಯಿ ಹೆಚ್ಚು ಅನುದಾನ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಕೃಷಿ ಪತ್ತಿನ ಸಹಕಾರಿ ಸಂಘಗಳು ಗ್ರಾಮೀಣ ಭಾಗದ ರೈತರ ಸಂಕಷ್ಟ ಕಾಲದಲ್ಲಿ ಕೈ ಹಿಡಿದಿವೆ ಎಂದು ಸಹಕಾರ ಸಚಿವ ಕೆ.ಎನ್ ರಾಜಣ್ಣ ಅಭಿಪ್ರಾಯಪಟ್ಟಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪತ್ತಿನ ಸಹಕಾರಿ ವ್ಯವಸ್ಥೆ ಇಲ್ಲದೆ ಹೋದರೆ ರೈತರು ಆರ್ಥಿಕವಾಗಿ ಸಂಕಷ್ಟಕ್ಕೆ ಗುರಿಯಾಗುತ್ತಿದ್ದರು. ಇಂದು ಸಹಕಾರಿ ಕ್ಷೇತ್ರ ರೈತರಿಗೆ ಆರ್ಥಿಕ ಊರುಗೋಲಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ತಿಳಿಸಿದ್ದಾರೆ. ಈಗಾಗಲೇ ರಾಜ್ಯದಲ್ಲಿ ಸಹಕಾರ ಕ್ಷೇತ್ರ ಪ್ರಗತಿಯತ್ತ ಸಾಗುತ್ತಿದ್ದು, ಇನ್ನಷ್ಟು ಅಭಿವೃದ್ಧಿಪಡಿಸುವ ಜವಾಬ್ದಾರಿ ನಮ್ಮ ಮೇಲಿದೆ ಎಂದು ಹೇಳಿದ್ದಾರೆ.

<><><><>

ಮುಖ್ಯಮಂತ್ರಿ ಸಿದ್ಧರಾಮಯ್ಯನವರ ಬಜೆಟ್, ದಾಖಲೆಯ ಸಾಲದ ಹೊರೆ ಹೆಚ್ಚಿಸುವುದೇ ಆಗಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಆರೋಪಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತಾಡಿದ ಅವರು, ಪ್ರಸ್ತುತ ಆಡಳಿತಾವಧಿಯಲ್ಲಿ ಇದುವರೆಗೆ ೪ ಲಕ್ಷ ಕೋಟಿಗೂ ಅಧಿಕ ಪ್ರಮಾಣದಲ್ಲಿ ಸಾಲ ಮಾಡಲಾಗಿದ್ದು, ನಿನ್ನೆ ಮಂಡಿಸಲಾದ ಬಜೆಟ್ ನಲ್ಲೂ ೧ ಲಕ್ಷ ೧೬ ಸಾವಿರದ ೧೭೦ ಕೋಟಿ ರೂಪಾಯಿಗಳ ಸಾಲ ಮಾಡಲಾಗಿದೆ ಎಂದು ದೂರಿದ್ದಾರೆ.  ಮತ ಬ್ಯಾಂಕ್‌ಗಾಗಿ ಅಸಂವಿಧಾನಿಕ ಮತೀಯ ಮೀಸಲಾತಿಗೆ ಆದ್ಯತೆ ನೀಡಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><><><>

ಕಳೆದ ಹಲವು ದಶಕಗಳಿಂದ ಆಕಾಶವಾಣಿ ಸುದ್ದಿ ನಂಬಿಕೆಗೆ  ಅರ್ಹವಾಗಿದ್ದು ಇಂದಿಗೂ ಅದೇ ನಂಬಿಕೆಯನ್ನು ಉಳಿಸಿಕೊಂಡು ಬಂದಿದೆ ಎಂದು ಆಕಾಶವಾಣಿ ಸುದ್ದಿ ವಿಭಾಗದ ಮಹಾ ನಿರ್ದೇಶಕಿ ಪ್ರಜ್ಞಾ ಪಾಲಿವಾಲ್ ಗೌರ್ ತಿಳಿಸಿದ್ದಾರೆ. ಮೈಸೂರು ಆಕಾಶವಾಣಿ ೯೦ ವರ್ಷ ಪೂರೈಸಿರುವ ಹಿನ್ನಲೆಯಲ್ಲಿ ಆಕಾಶವಾಣಿಯ ನುಡಿ ನಾದ ಸಂಗಮ ವಿಶೇಷ ಕಾರ್ಯಕ್ರಮದ ಸಂವಾದದಲ್ಲಿ ಭಾಗವಹಿಸಿ ಮಾತನಾಡಿದ ಅವರು, ೯೦ ವಸಂತಗಳನ್ನು ಪೂರೈಸಿರುವುದು ಮೈಸೂರು ಆಕಾಶವಾಣಿಯ ಮಹತ್ವದ ಮೈಲಿಗಲ್ಲು ಎಂದು ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ, ದೇಶದ ಮಹಿಳೆಯರಿಗೆ ಮಹಿಳಾ ದಿನಾಚರಣೆಯ  ಶುಭಾಶಯ ಕೋರಿದ ಗೌರ್, ದೆಹಲಿಯ ಸುದ್ದಿ ವಿಭಾಗದಲ್ಲಿಂದು ಮಹಿಳೆಯರೇ  ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ಸಂತಸ ಹಂಚಿಕೊಂಡಿದ್ದಾರೆ.

<><><><>

ನೇರಳೆ ಮಾರ್ಗದ ಮಾಗಡಿ ರಸ್ತೆ ಮತ್ತು ಎಂಜಿ ರಸ್ತೆ ಮೆಟ್ರೋ ನಿಲ್ದಾಣಗಳ ನಡುವೆ ನಮ್ಮ ಮೆಟ್ರೋ ಸಂಚಾರ ನಾಳೆ ಬೆಳಗ್ಗೆ ೭ ಗಂಟೆಯಿಂದ ೧೧ಗಂಟೆಯವರೆಗೆ ಸ್ಥಗಿತಗೊಳ್ಳಲಿದೆ ಎಂದು ಬೆಂಗಳೂರು ಮೆಟ್ರೋ ರೈಲು ನಿಗಮ ತಿಳಿಸಿದೆ. ಮಾಗಡಿ ರಸ್ತೆ ಮತ್ತು ಎಂಜಿ ರಸ್ತೆ ಮೆಟ್ರೋ ನಿಲ್ದಾಣಗಳ ನಡುವೆ ಹಳಿ ನಿರ್ವಹಣಾ ಕಾಮಗಾರಿಯನ್ನು ಬೆಳಿಗೆ ೦೭:೦೦ ರಿಂದ ೧೦:೦೦ ಗಂಟೆಯವರೆಗೆ ಕೈಗೊಳ್ಳಲಿದೆ. ಈ ಹಿನ್ನಲೆಯಲ್ಲಿ ಮಾಗಡಿ ರಸ್ತೆ ಮತ್ತು ಎಂಜಿ ರಸ್ತೆ ಮೆಟ್ರೋ ನಿಲ್ಯಾಣಗಳ ನಡುವಿನ ಮೆಟ್ರೋ ಸೇವೆಗಳನ್ನು ರದ್ದುಪಡಿಸಲಾಗುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

<><><><>

ರಾಜ್ಯ ಬಜೆಟ್ ಜನವಿರೋಧಿ, ದಲಿತ ವಿರೋಧಿ ಬಜೆಟ್ ಆಗಿದೆ ಎಂದು ಆರೋಪಿಸಿ ಹಾಸನ ಜಿಲ್ಲಾ ಬಿಜೆಪಿ ವತಿಯಿಂದ ನಗರದ ಹೇಮಾವತಿ ಪ್ರತಿಮೆ ಬಳಿ ಪ್ರತಿಭಟನೆ ನಡೆಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಬಜೆಟ್‌ನಲ್ಲಿ ಕೋಲಾರ ನರಸಾಪುರ ಕೈಗಾರಿಕಾ ಪ್ರದೇಶಕ್ಕೆ ಮಹಿಳಾ ಉದ್ಯೋಗಿಗಳಿಗೆ ವಸತಿ ಗೃಹ ನಿರ್ಮಾಣ, ಹಾಗೂ ಪಿಪಿಪಿ ಮಾದರಿಯ ವೈದ್ಯಕೀಯ ಕಾಲೇಜು ಕೊಡುಗೆ ನೀಡಿರುವುದು ಖುಷಿ ವಿಚಾರ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಯುವ ಘಟಕದ ಅಧ್ಯಕ್ಷ ರಾಮು ಶಿವಣ್ಣ ಆಕಾಶವಾಣಿಗೆ ತಿಳಿಸಿದ್ದಾರೆ.

**ಧ್ವನಿ -ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಯುವ ಘಟಕದ ಅಧ್ಯಕ್ಷ ರಾಮು ಶಿವಣ್ಣ (೨೫ ಸೆಕೆಂಡ್‌ಗಳು)**

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>